## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 06.03.2021 ರ
## ಸಭಾ ನಡುವಳಿ

ದಿನಾಂಕ: 06.03.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀನಾಥ್ | ಹೆಡ್ ಕಾನ್ಸ್‌ಟೆಬಲ್, ಚಿಕ್ಕಜಾಲ ಪೋಲಿಸ್ ಠಾಣೆ |
| 4 | ಶ್ರೀನಿವಾಸ ಮೂರ್ತಿ | ವಿದ್ಯುತ್ ವಿಭಾಗ, ಬಿಬಿಎಂಪಿ |
| 5 | ಸೋಮಶೇಖರ್ | ವ್ಯವಸ್ಥಾಪಕರು, ಸ.ಕಂ.ಅ ಬ್ಯಾ.ಉ.ವಿ |
| 6 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 7 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳ ನಿರ್ವಹಣೆ ಹಾಗೂ ಚರಂಢಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ವಿಲೇವಾರಿ ಮಾಡಲು ಹಾಗೂ ಕುಡಿಯುವ ನೀರನ ಅಭಾವ ವಿರುವ ಪ್ರದೇಶಗಳಲ್ಲಿ ಟ್ಯಾಂಕರ ಮುಖಾಂತರ ನೀರು ಸರಬರಾಜು ಮಾಡಲು ಈಗಾಗಲೇ ನಿಯೋಜನೆ ಮಾಡಲಾಗಿರುವ ಗುತ್ತಿಗೆದಾರರ ಗುತ್ತಿಗೆ ಅವಧಿ ಮುಕ್ತಾಯಗೊಂಡಿರುವುದರಿಂದ ಸಾರ್ವಜನಿಕರ ದೂರುಗಳೀಗೆ ಸ್ಪಂದಿಸಿ ದೂರುಗಳನ್ನು ಬಗೆಹರಿಸಲು



Scanned by CamScanner

ಹಾಗೂ ಕುಡಿಯುವ ನೀರಿನ ಅಭಾವವಿರುವ ಪ್ರದೇಶಗಳಲ್ಲಿ ನೀರಿನ ಸರಬರಾಜು ಮಾಡಲು ಸಾಧ್ಯವಾಗುತ್ತಿರುವುದಿಲ್ಲವೆಂದು ಹಾಗೂ 2020-21ನೇ ಸಾಲಿನ ಕ್ರಿಯಾ ಯೋಜನೆಗೆ ಇಲ್ಲಿಯವರೆವಿಗೂ ಕೇಂದ್ರ ಕಛೇರಿಯಿಂದ ಅನುಮೋದನೆ ಹಾಗೂ ಜಾಬ್ ಸಂಖ್ಯೆಗಳನ್ನು ನೀಡಿರುವುದಿಲ್ಲವೆಂದು ಸ.ಅ ರವರು ತಿಳಿಸಿದರು, ಸದರಿ ವಿಷಯದ ಬಗ್ಗೆ ನೊಡೆಲ್ ಅಧಿಕಾರಿಯವರು ಈ ಬಗ್ಗೆ ಪರಿಶೀಲಿಸಿ ಟ್ರಾಕ್ಟರ್ ವಾಹನ, ಜೆ.ಸಿ.ಬಿ ಹಾಗೂ ಕೂಲಿ ಆಳುಗಳನ್ನು ಹಾಗೂ ನೀರಿನ ಟ್ಯಾಂಕರ್ ವಾಹನವನ್ನು ಹೊರಗುತ್ತಿಗೆಯಿಂದ ಪಡೆದು ಕಾಮಗಾರಿಯನ್ನು ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಮತ್ತೊಮ್ಮೆ ವಾರ್ಡ್ ಸ.ಅ ರವರಿಗೆ ಸೂಚಿಸಿದರು.

2. ರಾಜೇಂದ್ರ ಹೆಗಡೆ, ಟೆಲಿಕಾಂ ಬಡಾವಣೆ, ರವರು ಮಾತನಾಡಿ ಟೆಲಿಕಾಂ ಬಡಾವಣೆಯಲ್ಲಿ ತುರ್ತಾಗಿ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಕೋರಿದರು
   1 ಟೆಲಿಕಾಂ ಬಡಾವಣೆಯಲ್ಲಿರುವ ಪಾರ್ಕ್‌ಗಳಲ್ಲಿ ವಿದ್ಯುತ್ ದೀಪಗಳು ಉರಿಯುತ್ತಿರುವುದಿಲ್ಲ ಇದರಿಂದ ಸಾರ್ವಜನಿಕರಿಗೆ ತುಂಬ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು
   2 ಟೆಲಿಕಾಂ ಬಡಾವಣೆಯ ರಾಜಕಾಲುವೆ ಸ್ವಚ್ಛತೆ ಮಾಡಿಕೊಡಲು ಕೋರಿದರು.
   3 ಟೆಲಿಕಾಂ ಬಡಾವಣೆ 1ನೇ ಮುಖ್ಯರಸ್ತೆ, 6ನೇ ಮತ್ತು 7ನೇ ಅಡ್ಡರಸ್ತೆಯಲ್ಲಿ ಕಲ್ವರ್ಟ್‌ಗಳ ನಿರ್ಮಾಣ ಮಾಡಿಕೊಡಲು ಕೋರಿದರು.
   4 ಬಡಾವಣೆಗಳಲ್ಲಿ ಎಲ್.ಇ.ಡಿ ಬೀದಿ ದೀಪಗಳನ್ನು ಅಳವಡಿಸುವಂತೆ ಕೋರಿದರು. ಹಾಗೂ ಟೆಲಿಕಾಂ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ವಿವರಿಸಿದರು ಈ ಬಗ್ಗೆ ಕೂಡಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕ್ರಮ ವಹಿಸುವಂಥೆ ಸೂಚಿಸಿದರು.
   5 ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆ 2ನೇ ಹಂತದಲ್ಲಿ ಮಳೆ ನೀರು ಗಾಲುವೆಯನ್ನು ಸ್ವಚ್ಛಗೊಳಿಸುವಂತೆ ಕೋರಿದರು

3. ಬಸವಲಿಂಗಪ್ಪನಗರದ ನಿವಾಸಿಗಳು ಮಾತನಾಡಿ ಒಳಚರಂಡಿ ವ್ಯವಸ್ಥೆಯು ತುಂಬ ಹದಗೆಟ್ಟಿದ್ದು, ಶೀಘ್ರವಾಗಿ ಒಳಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕೋರಿದರು. ಹಾಗೂ ಬಡಾವಣೆಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಮಾಡಿಸಿಕೊಡಲು ಕೋರಿದರು.
4. ಜನಾರ್ಧನ್ ಟೆಲಿಕಾಂ ಬಡಾವಣೆ ವಿನ್‌ಪೀಲ್ಡ್ ಗಾರ್ಡನ್ ರವರು ಮಾತನಾಡಿ ಬಡಾವಣೆಯಲ್ಲಿ ಒಣ ಕಸವನ್ನು ತೆಗೆಯುತ್ತಿಲ್ಲವೆಂದು ಹಾಗೂ ವಾರದಲ್ಲಿ 2ಬಾರಿ ಕಸ ತೆಗೆಯುವಂಥೆ ಕ್ರಮ ವಹಿಸಲು ಕೋರಿದರು.
5. ಬೆಸ್ಕಾಂ ಇಲಾಖೆಯಿಂದ ಕೇಬಲ್ ಅಳವಡಿಸುವ ಜಾಗದಲ್ಲಿ ಸರಿಯಾಗಿ ರಸ್ತೆಯನ್ನು ಮುಚ್ಚದೇ ಸಾರ್ವಜನಿಕರಿಗೆ ತುಂಬ ತೊಂದರೆಯಗುತ್ತಿರುತ್ತದೆ ಇದರಿಂದ ಬೆಸ್ಕಾಂ ಇಲಾಖೆಯವರಿಗೆ ಈ ಬಗ್ಗೆ ಸೂಚನೆ ನೀಡಲು ಸಾರ್ವಜನಿಕರು ಕೋರಿದರು.
6. ಸಭೆಯಲ್ಲಿ ನರೆದಿದ್ದ ಸಾರ್ವಜನಿಕರ ಸೇರಿದಂತೆ ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಿಯಾದ ಅಧಿಕಾರಿಗಳ ಮೇಲೆ ಕ್ರಮ ವಹಿಸಲು ಕೋರಿದರು ಇದಕ್ಕೆ ನೋಡೆಲ್ ಅಧಿಕಾರಿಯವರು ಮಾತನಾಡಿ ಜಂಟಿ ಆಯುಕ್ತರು,



Scanned by CamScanner

ಯಲಹಂಕ ವಲಯ ರವರ ಗಮನಕ್ಕೆ ಲಿಖಿತ ಮೂಲಕ ತಿಳಿಸಲಾಗುವುದೆಂದು ಹಾಗೂ ನೋಟಿಸ್‌ಗಳನ್ನು ನೀಡಲು ಕೋರಲಾಗುವುದೆಂದು ತಿಳಿಸಿದರು.

7. ಜನಾರ್ಧನ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳ ಬಗ್ಗೆ ಕ್ರಮ ವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸುವಂತೆ ಕೋರಿದರು ಈ ಬಗ್ಗೆ ವಾರ್ಡ್ ಸ.ಅ ರವರು ಮಾತನಾಡಿ ಈ ಬಗ್ಗೆ ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚುಲಾಗುತ್ತಿದ್ದು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯ 95% ರಷ್ಟು ಭಾಗ ಪಾಲಿಕೆಯ ವತಿಯಿಂದ ಯಾವುದೇ ಶುಲ್ಕವಿಲ್ಲದೇ ಕುಡಿಯುವ ನೀರಿನ ಸರಬರಾಜು ಮಾಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಿಸಿದೆ
6. ಕಛೇರಿಕಡತಕ್ಕೆ.



Scanned by CamScanner